## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಧಾರವಾಡ ಜಿಲ್ಲಾ ಪಂಚಾಯತ್ ಕಾರ್ಯಾಲಯಕ್ಕೆ ಹೊಸ ವಾಹನ ಖರೀದಿಸಲು ಅನುಮತಿ ನೀಡುವ ಬಗ್ಗೆ.

ಓದಲಾಗಿದೆ: ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಧಾರವಾಡ ಇವರ ಪತ್ರ ಸಂಖ್ಯೆ: ಧಾಜಿಪಂ/ಉಕಾ/ಸಿ-8/ಸಿಆರ್/2014-15 ದಿನಾಂಕ 18.02.2015 ಕ್ಕೆ ಕೊನೆಗೊಂಡ ಪತ್ರ ವ್ಯವಹಾರ.

:--:

**ಪ್ರಸ್ತಾವನೆ:**

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಧಾರವಾಡ ಇವರು ಮೇಲೆ ಓದಲಾದ ದಿನಾಂಕ 18.02.2015 ರ ಪತ್ರದಲ್ಲಿ ಜಿಲ್ಲಾ ಪಂಚಾಯಿತಿ ಧಾರವಾಡ ಕಾರ್ಯಾಲಯದ ಉಪಯೋಗಕ್ಕಾಗಿ ಬಳಸುತ್ತಿರುವ ವಾಹನ ಸಂಖ್ಯೆ: ಕೆಎ 25 ಜಿ 212 ಅನುಪಯುಕ್ತವಾಗಿರುವ ಕಾರಣ. ಹೊಸ ವಾಹನವನ್ನು ಖರೀದಿಸಲು ಹಾಗೂ ಸದರಿ ವೆಚ್ಚವನ್ನು ಜಿಲ್ಲಾ ಪಂಚಾಯಿತಿಯ ಲೆಕ್ಕ ಶೀರ್ಷಿಕೆ "2575-00-100-0-28 (ಯೋಜನೇತರ)" ಅಡಿಯಲ್ಲಿ 2014-15ನೇ ಸಾಲಿನಲ್ಲಿ ಲಭ್ಯವಿರುವ ಅನುದಾನದಲ್ಲಿ ಭರಿಸಲು ಸರ್ಕಾರದ ಅನುಮತಿಯನ್ನು ಕೋರಿರುತ್ತಾರೆ.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಧಾರವಾಡ ಇವರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಗ್ರಾಅಪ 45 ಕೆಎಸ್ಎಸ್ 2015 ಬೆಂಗಳೂರು**
**- ದಿನಾಂಕ 28.03.2015**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಧಾರವಾಡ ಜಿಲ್ಲಾ ಪಂಚಾಯತ್ ಕಾರ್ಯಾಲಯದ ಉಪಯೋಗಕ್ಕಾಗಿ ಲೆಕ್ಕ ಶೀರ್ಷಿಕೆ "2575-00-100-0-28 (ಯೋಜನೇತರ)" 2014-15ನೇ ಸಾಲಿನಲ್ಲಿ ಲಭ್ಯವಿರುವ ಅನುದಾನದಲ್ಲಿ ವೆಚ್ಚವನ್ನು ಭರಿಸಿ ಹೊಸ ವಾಹನವನ್ನು ಖರೀದಿಸಲು ಈ ಕೆಳಕಂಡ ಷರತ್ತಿಗೊಳಪಟ್ಟು ಸರ್ಕಾರದ ಅನುಮೋದನೆ ನೀಡಿದೆ.

1. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 111 ಶಿವಾನೀ 2011 ದಿನಾಂಕ 9.5.2013 ರಲ್ಲಿ ಇಲಾಖಾ ಮುಖ್ಯಸ್ಥರಿಗೆ ವಾಹನ ಖರೀದಿಗಾಗಿ ನಿಗದಿಪಡಿಸಿರುವ ರೂ. 6.5 ಲಕ್ಷಗಳ (ಆರುವರೆ ಲಕ್ಷ ರೂಪಾಯಿಗಳು ಮಾತ್ರ) (ತೆರಿಗೆ ಹೊರತುಪಡಿಸಿ) ಮಿತಿಯೊಳಗೆ ಖರೀದಿಸುವುದು.
2. ಹಳೆಯ ವಾಹನವನ್ನು ನಿಯಮಾನುಸಾರ ವಿಲೇವಾರಿ ಮಾಡಿ ಅದರಿಂದ ಬರುವ ಮೌಲ್ಯವನ್ನು ಸರ್ಕಾರಿ ಲೆಕ್ಕ ಶೀರ್ಷಿಕೆಗೆ ಜಮಾ ಮಾಡುವುದು.

. . 2 . .

3. ಸದರಿ ಹೊಸ ವಾಹನ ಖರೀದಿಸಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ ಹಾಗೂ ಅದರಡಿ ರಚಿಸಿರುವ ನಿಯಮಗಳನ್ನು ಪಾಲಿಸತಕ್ಕದ್ದು.
4. ಈ ಆದೇಶವನ್ನು ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ: ಆಇ 119 ವೆಚ್ಚ-6/2015 ದಿನಾಂಕ 27.3.2015 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಆರ್.ಲೀಲಾವತಿ)
ಸರ್ಕಾರದ ಜಂಟಿ ಕಾರ್ಯದರ್ಶಿ(ಆಡಳಿತ),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಧಾರವಾಡ
3. ಖಜಾನಾಧಿಕಾರಿ, ಜಿಲ್ಲಾ ಖಜಾನೆ, ಧಾರವಾಡ
4. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ ಕಾರ್ಯದರ್ಶಿ (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು
6. ಜಂಟಿ ಕಾರ್ಯದರ್ಶಿ (ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಸಹಾಯಕರು.
7. ನಗದು ಶಾಖೆ (ಸೇವೆಗಳು-ಸಿ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
8. ಮೇಲ್ವಿಚಾರಕರು, ಗಣಕ ಕೋಶ, ಗ್ರಾಅ ಮತ್ತು ಪಂ.ರಾಜ್ ಇಲಾಖೆ.
9. ಮಾಹಿತಿ ಕೇಂದ್ರ/ ಶಾಖಾ ರಕ್ಷಕ ಕಡತ / ಹೆಚ್ಚುವರಿ ಪ್ರತಿ.